ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ರಾಜ್ಯದಲ್ಲಿರುವ ಎಂ.ಸ್ಯಾಂಡ್ ಘಟಕಗಳ ಕುರಿತು

ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನ ಸಭೆಯಿಂದ ಚುನಾಯಿತರಾದವರು)

194(264) ಮಾನ್ಯ ಗಣಿ ಮತ್ತು ಭೂವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಎಂ. ಸ್ಯಾಂಡ್ ಘಟಕಗಳು ಎಷ್ಟು; ಈ ಘಟಕಗಳಿಂದ ವರ್ಷಕ್ಕೆ ಎಷ್ಟು ಟನ್ ಎಂ ಸ್ಯಾಂಡ್ ಉತ್ಪಾದನೆಯಾಗುತ್ತಿದೆ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಘಟಕಗಳಲ್ಲಿ ಉತ್ಪಾದನೆಯಾಗುವ ಒಂದು ಟನ್ ಎಂ ಸ್ಯಾಂಡ್‌ಗೆ ಸರ್ಕಾರ ನಿಗದಿಪಡಿಸಿರುವ ದರವೇನು;

(ಇ) ಸರ್ಕಾರವು ಕಳೆದ 3 ವರ್ಷಗಳ ಲ್ಲಿ ಎಷ್ಟು ಪ್ರಮಾಣದ ಮರಳನ್ನು ವಿದೇಶಗಳಿಂದ ಆಮದು ಮಾಡಿಕೊಂಡಿದೆ?